ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು -1**

ಸಂಖ್ಯೆ:-ಸಿ1(4)/ಸ.ಪ್ರೌ.ಮು.ಶಿ.ಸಾ.ವರ್ಗಾವಣೆ-26/2016-17 ದಿನಾಂಕ: 02-08-2016

**ಅಧಿಕೃತ ಜ್ಞಾಪನ**

ವಿಷಯ:- 2016-17ನೇ ಸಾಲಿನ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳ ಸಾಮಾನ್ಯ ವರ್ಗಾವಣೆಯನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ಮಾಡುವ ಬಗ್ಗೆ.

ಉಲ್ಲೇಖ:- 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 1 ಶಾಸನ 2007 ದಿ:01.09.2007
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 173 ಇಟಿಆರ್ 2007 ದಿ:15.10.2007
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 173 ಇಟಿಆರ್ 2007 ದಿ:14.11.2007
4. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 37 ಇಟಿಆರ್ 2009 ದಿ:23.04.2011
5. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 11 ಶಾಸನ 2015 ದಿ:13.05.2015
6. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 41 ಶಾಸನ 2015 ದಿ:13.08.2015
7. ಸರ್ಕಾರದ ಪತ್ರ ಸಂಖ್ಯೆ: ಇಡಿ 06 ಪಿಬಿಎಸ್ 2016 ದಿ:04.07.2016.

-*****-

ಉಲ್ಲೇಖ-1ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007 ಜಾರಿಗೆ ಬಂದಿರುತ್ತದೆ. ಇದರ ಅನ್ವಯ ಉಲ್ಲೇಖ-2ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007ನ್ನು ರೂಪಿಸಲಾಗಿದೆ. ಉಲ್ಲೇಖ-3ರ ಸರ್ಕಾರದ ಅಧಿಸೂಚನೆಯಲ್ಲಿ ಎ, ಬಿ, ಸಿ, ವಲಯದ ವರ್ಗೀಕರಣದ ಪ್ರದೇಶ ಹಾಗೂ ವ್ಯಾಪ್ತಿಯನ್ನು ಅಧಿಸೂಚಿಸಲಾಗಿದೆ. ಉಲ್ಲೇಖ-4ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ನಿಯಮಗಳು 2011ನ್ನು ಹೊರಡಿಸಲಾಗಿದೆ. ಉಲ್ಲೇಖ-5 ಮತ್ತು 6ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧಿನಿಯಮ-2015ನ್ನು ಹೊರಡಿಸಲಾಗಿದೆ.

ಮೇಲಿನ ಆದೇಶಗಳಂತೆ 2016-17ನೇ ಸಾಲಿನಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳ ವರ್ಗಾವಣೆ ಪ್ರಕ್ರಿಯೆಯನ್ನು ನಡೆಸಲು ತೀರ್ಮಾನಿಸಲಾಗಿದೆ ಮತ್ತು ಇದಕ್ಕೆ ಸರ್ಕಾರದ ಆಡಳಿತಾತ್ಮಕ ಅನುಮೋದನೆಯು ಉಲ್ಲೇಖ(7)ರಂತೆ ದೊರೆತಿರುತ್ತದೆ. ಅದರ ಅನ್ವಯ 2016-17ನೇ ಸಾಲಿನ ಸಾಮಾನ್ಯ ವರ್ಗಾವಣೆಗಳನ್ನು ಆಗಸ್ಟ್/ಸೆಪ್ಟೆಂಬರ್-2016ರಲ್ಲಿ ನಡೆಸಲಾಗುವುದು. ವರ್ಗಾವಣೆ ಬಯಸುವವರು ಅರ್ಜಿಗಳನ್ನು On Line ಮೂಲಕ ಮಾತ್ರ ಸಲ್ಲಿಸಬೇಕಾಗಿರುತ್ತದೆ. **ಖುದ್ದಾಗಿ ಅಥವಾ ಟಪಾಲು ಮೂಲಕ ಲಿಖಿತವಾಗಿ ಸಲ್ಲಿಸಿದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಮತ್ತು ಪರಿಗಣಿಸಲಾಗುವುದಿಲ್ಲ.** ವರ್ಗಾವಣೆ ಪ್ರಕ್ರಿಯೆಗೆ ವೇಳಾಪಟ್ಟಿಯನ್ನು ಕೆಳಗಿನಂತೆ ನಿಗದಿಪಡಿಸಿದೆ.

| ಕ್ರ.ಸಂ | ವಿವರ | ದಿನಾಂಕ | ಕ್ರಮ ವಹಿಸುವ ಅಧಿಕಾರಿಗಳು |
|---|---|---|---|
| 1 | ವರ್ಗಾವಣೆ ಬಯಸುವ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳಿಂದ ಅರ್ಜಿಗಳನ್ನು ಕರೆಯಲು ಪ್ರಕಟಣೆ | 05-08-2016 | 1.ಆಯುಕ್ತರ ಕಛೇರಿ, ಬೆಂಗಳೂರು<br>2.ಅಪರ ಆಯುಕ್ತರ ಕಛೇರಿ, ಧಾರವಾಡ<br>3.ಅಪರ ಆಯುಕ್ತರ ಕಛೇರಿ, ಗುಲ್ಬರ್ಗಾ<br>4.ಉಪನಿರ್ದೇಶಕರು [ಆಡಳಿತ]<br>5.ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 2 | ವರ್ಗಾವಣೆ ಕೋರುವ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ಅಂತರ್ಜಾಲದ [on line] ಮೂಲಕ ಇಲಾಖೆ ನಿಗಧಿ ಪಡಿಸಿರುವ ನಮೂನೆಯಲ್ಲಿ ಅರ್ಜಿ ಸಲ್ಲಿಸುವ ದಿನಾಂಕ | 06-08-2016<br>ರಿಂದ<br>19-08-2016 | ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು |

| | | | |
|---|---|---|---|
| 3 | ಅರ್ಜಿ ಸಲ್ಲಿಸಿರುವ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ಆಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರ ಕಛೇರಿಗೆ ಹಾಜರಾಗಿ ಅಗತ್ಯ ದಾಖಲೆಗಳನ್ನು ನೀಡಿ ವರ್ಗಾವಣೆ ಅರ್ಜಿ ಸಲ್ಲಿಸಿರುವುದಕ್ಕೆ ಸ್ವೀಕೃತಿ ಪಡೆಯಲು ನಿಗಧಿಪಡಿಸಿದ ದಿನಾಂಕ | 06-08-2016 ರಿಂದ 22-08-2016 | ವರ್ಗಾವಣೆಗೆ ಅರ್ಜಿ ಸಲ್ಲಿಸಿರುವ ಎಲ್ಲಾ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ಅರ್ಜಿ ಸಲ್ಲಿಸಿದ ನಂತರ ಎರಡು ದಿನದ ಒಳಗಾಗಿ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರ ಕಛೇರಿಗೆ ದಾಖಲೆಗಳೊಂದಿಗೆ ಖುದ್ದಾಗಿ ಹಾಜರಾಗುವುದು. |
| 4 | ಉಪನಿರ್ದೇಶಕರು (ಆಡಳಿತ) / ರಾಜ್ಯ ಕಛೇರಿಗಳ ಮುಖ್ಯಸ್ಥರ ಹಂತದಲ್ಲಿ ಅಂತರ್ಜಾಲದ [on line] ಮೂಲಕ ಅರ್ಜಿಗಳ ಪರಿಶೀಲನೆ, ಮಾಹಿತಿ ದೃಢೀಕರಣ ಹಾಗು ಅರ್ಜಿ ಅನುಮೋದನೆಗೆ ನಿಗಧಿ ಪಡಿಸಿದ ದಿನಾಂಕ | 06-08-2016 ರಿಂದ 24-08-2016 | ಜಿಲ್ಲಾ ಉಪನಿರ್ದೇಶಕರು [ಆಡಳಿತ] ರಾಜ್ಯ ಕೇಂದ್ರ ಕಛೇರಿಗಳ ಮುಖ್ಯಸ್ಥರು |
| 5 | ಉಪನಿರ್ದೇಶಕರು [ಆಡಳಿತ], ರಾಜ್ಯ ಕಛೇರಿಗಳ ಮುಖ್ಯಸ್ಥರವರು ಅರ್ಜಿಗಳನ್ನು ಮತ್ತು ಆದ್ಯತೆಯ ಮೂಲ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ವರ್ಗಾವಣಾ ಪ್ರಾಧಿಕಾರಕ್ಕೆ ಮುದ್ದಾಂ ಸಲ್ಲಿಸಲು ಕೊನೆಯ ದಿನಾಂಕ. | 25-08-2016 | ಜಿಲ್ಲಾ ಉಪನಿರ್ದೇಶಕರು [ಆಡಳಿತ] ರಾಜ್ಯ ಕೇಂದ್ರ ಕಛೇರಿಗಳ ಮುಖ್ಯಸ್ಥರು |
| 6 | ಪರಸ್ಪರ ವರ್ಗಾವಣೆ ಬಯಸಿರುವ ಅಧಿಕಾರಿಗಳ ತಾತ್ಕಾಲಿಕ ಪಟ್ಟಿ ಪ್ರಕಟಣೆ. ಇಲಾಖೆಯ ವೆಬ್‌ಸೈಟ್‌ನಲ್ಲಿ | 29-08-2016 | 1.ಆಯುಕ್ತರ ಕಛೇರಿ, ಬೆಂಗಳೂರು<br>2.ಅಪರ ಆಯುಕ್ತರ ಕಛೇರಿ, ಧಾರವಾಡ<br>3.ಅಪರ ಆಯುಕ್ತರ ಕಛೇರಿ, ಗುಲ್ಬರ್ಗಾ |
| 7 | ಕೋರಿಕೆ ವರ್ಗಾವಣೆಗೆ ಸಂಬಂಧಿಸಿದಂತೆ ತಾತ್ಕಾಲಿಕ ಆದ್ಯತಾ ಪಟ್ಟಿ ಪ್ರಕಟಣೆ ಇಲಾಖೆಯ ವೆಬ್‌ಸೈಟ್‌ನಲ್ಲಿ | 29-08-2016 | 1.ಆಯುಕ್ತರ ಕಛೇರಿ, ಬೆಂಗಳೂರು<br>2.ಅಪರ ಆಯುಕ್ತರ ಕಛೇರಿ, ಧಾರವಾಡ<br>3.ಅಪರ ಆಯುಕ್ತರ ಕಛೇರಿ, ಗುಲ್ಬರ್ಗಾ |
| 8 | ಕೋರಿಕೆ/ಪರಸ್ಪರ ವರ್ಗಾವಣೆಗೆ ಸಂಬಂಧಿಸಿದಂತೆ ತಾತ್ಕಾಲಿಕ ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳನ್ನು ಉಪನಿರ್ದೇಶಕರು (ಆಡಳಿತ) ರವರಿಗೆ ಸಲ್ಲಿಸಲು ಕೊನೆಯ ದಿನಾಂಕ. | 30-08-2016 ರಿಂದ 01-09-2016 | ಸಂಬಂಧಿಸಿದ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು. |
| 9 | ಬಂದಂತಹ ಆಕ್ಷೇಪಣೆಗಳನ್ನು ಜಿಲ್ಲಾ ಉಪನಿರ್ದೇಶಕರು (ಆಡಳಿತ)/ ರಾಜ್ಯ ಕಛೇರಿಗಳ ಮುಖ್ಯಸ್ಥರವರು ಪರಿಶೀಲಿಸಿ ಆಯಾ ಆಯುಕ್ತರಿಗೆ ಸಲ್ಲಿಸಲು ಕೊನೆಯ ದಿನಾಂಕ [ಮುದ್ದಾಂ ತಲುಪಿಸುವುದು] | 03-09-2016 | 1. ಜಿಲ್ಲಾ ಉಪನಿರ್ದೇಶಕರು (ಆಡಳಿತ)<br>2. ರಾಜ್ಯ ಕೇಂದ್ರ ಕಛೇರಿಗಳ ಮುಖ್ಯಸ್ಥರು |
| 10 | ಖಾಲಿ ಹುದ್ದೆಗಳ ಮಾಹಿತಿಯನ್ನು ನಿಗಧಿಪಡಿಸಿರುವ ತಂತ್ರಾಂಶದಲ್ಲಿ ಭರ್ತಿ ಮಾಡುವುದು | 07-09-2016 | 1. ಜಿಲ್ಲಾ ಉಪನಿರ್ದೇಶಕರು (ಆಡಳಿತ)<br>2. ರಾಜ್ಯ ಕೇಂದ್ರ ಕಛೇರಿಗಳ ಮುಖ್ಯಸ್ಥರು |
| 11 | 1. ಕೋರಿಕೆ ವರ್ಗಾವಣೆಗೆ ಸಂಬಂಧಿಸಿದಂತೆ ಅಂತಿಮ ಆದ್ಯತಾ ಪಟ್ಟಿ ಪ್ರಕಟಣೆ.<br>2. ಪರಸ್ಪರ ವರ್ಗಾವಣೆ ಅಂತಿಮ ಪಟ್ಟಿ ಪ್ರಕಟಣೆ.<br>3. ಖಾಲಿ ಹುದ್ದೆಗಳ ಅಂತಿಮ ಪಟ್ಟಿ ಪ್ರಕಟಣೆ ಇಲಾಖಾ ವೆಬ್‌ಸೈಟ್‌ನಲ್ಲಿ | 09-09-2016 | 1.ಆಯುಕ್ತರ ಕಛೇರಿ, ಬೆಂಗಳೂರು<br>2.ಅಪರ ಆಯುಕ್ತರ ಕಛೇರಿ, ಧಾರವಾಡ<br>3.ಅಪರ ಆಯುಕ್ತರ ಕಛೇರಿ, ಗುಲ್ಬರ್ಗಾ |

| | | | |
|---|---|---|---|
| 12 | ಪರಸ್ಪರ ವರ್ಗಾವಣೆಗೆ ಕೌನ್ಸಿಲಿಂಗ್‌ಗೆ ಹಾಜರಾಗುವ ದಿನಾಂಕ | 13-09-2016 | ಸಂಬಂಧಿಸಿದ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು. |
| 13 | ಪರಸ್ಪರ ವರ್ಗಾವಣೆ ಜಾರಿಗೊಳಿಸುವ ದಿನಾಂಕ | 13-09-2016 | 1.ಆಯುಕ್ತರ ಕಛೇರಿ, ಬೆಂಗಳೂರು<br>2.ಅಪರ ಆಯುಕ್ತರ ಕಛೇರಿ, ಧಾರವಾಡ<br>3.ಅಪರ ಆಯುಕ್ತರ ಕಛೇರಿ, ಗುಲ್ಬರ್ಗಾ |
| 14 | ಆಯಾ ಆಯುಕ್ತರ ವ್ಯಾಪ್ತಿಯೊಳಗೆ [ಘಟಕದೊಳಗೆ] ಕೋರಿಕೆ ವರ್ಗಾವಣೆಗಳಿಗೆ ಕೌನ್ಸಿಲಿಂಗ್ | 20-09-2016<br>ಮತ್ತು<br>21-09-2016 | 1.ಆಯುಕ್ತರ ಕಛೇರಿ, ಬೆಂಗಳೂರು<br>2.ಅಪರ ಆಯುಕ್ತರ ಕಛೇರಿ, ಧಾರವಾಡ<br>3.ಅಪರ ಆಯುಕ್ತರ ಕಛೇರಿ, ಗುಲ್ಬರ್ಗಾ |
| 15 | ಆಯಾ ಆಯುಕ್ತರ ವ್ಯಾಪ್ತಿಯ ಹೊರಗಿನ [ಅಂತರ ಘಟಕ] ಕೋರಿಕೆ ವರ್ಗಾವಣೆಗಳಿಗೆ ಕೌನ್ಸಿಲಿಂಗ್ | 25-09-2016 | 1.ಆಯುಕ್ತರ ಕಛೇರಿ, ಬೆಂಗಳೂರು<br>2.ಅಪರ ಆಯುಕ್ತರ ಕಛೇರಿ, ಧಾರವಾಡ<br>3.ಅಪರ ಆಯುಕ್ತರ ಕಛೇರಿ, ಗುಲ್ಬರ್ಗಾ |

2016-17ನೇ ಆಗಸ್ಟ್/ಸೆಪ್ಟೆಂಬರ್ ಮಾಹೆಯಲ್ಲಿ ನಡೆಯುವ ಸಾಮಾನ್ಯ ವರ್ಗಾವಣೆಗೆ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ಅಂತರ್ಜಾಲದ [On Line] ಮೂಲಕ ಅರ್ಜಿಗಳನ್ನು ಸಲ್ಲಿಸುವ/ಪರಿಶೀಲಿಸುವ ವಿಧಾನವನ್ನು ಈ ಕೆಳಗಿನ ಕಂಡಿಕೆಗಳಲ್ಲಿ ನೀಡಲಾಗಿದೆ.

**ವರ್ಗಾವಣಾ ಅರ್ಜಿಗಳು:-** ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 173 ಇಟಿಆರ್ 2007 ದಿನಾಂಕ: 15.10.2007 ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007ರ ನಿಯಮ 6 ರಂತೆ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದ ಹಾಗೂ ತತ್ಸಮಾನ ವೃಂದಕ್ಕೆ ಸಂಬಂಧಪಟ್ಟ ವರ್ಗಾವಣೆ ಅರ್ಜಿಗಳನ್ನು [1.ಜ್ಯೇಷ್ಠತಾ ಘಟಕದ ಒಳಗೆ/ಘಟಕದ ಹೊರಗೆ. 2.ಪರಸ್ಪರ] ನಿರ್ದಿಷ್ಟ ಪಡಿಸಿರುವ ಎರಡು ಅರ್ಜಿ ನಮೂನೆಗಳನ್ನು ಇಲಾಖೆಯ ವೆಬ್‌ಸೈಟ್ www.schooleducation.kar.nic.in ನಲ್ಲಿ ಪ್ರಕಟಿಸಲಾಗುತ್ತದೆ.

**2016-17ನೇ ಸಾಲಿಗೆ ಅರ್ಜಿ ಸಲ್ಲಿಸುವ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದವರಿಗೆ ಸೂಚನೆಗಳು:**

1. **ಘಟಕದೊಳಗಿನ ಕೋರಿಕೆ ವರ್ಗಾವಣೆಗೆ On Line ನಲ್ಲಿ ಅರ್ಜಿ ಸಲ್ಲಿಸುವ ಬಗೆ:-** ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮುಖ್ಯ ಶಿಕ್ಷಕರು, ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪಪ್ರಾಂಶುಪಾಲರು, ಡಯಟ್/ಟಿಟಿಐ ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಶಿಕ್ಷಕರ ವೃಂದದ ಉಪನ್ಯಾಸಕರು ಹಾಗು ಇಲಾಖೆಯ ವಿವಿಧ ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮುಖ್ಯ ಶಿಕ್ಷಕರ ವೃಂದದ ಅಧಿಕಾರಿಗಳು ಕೋರಿಕೆ ಮೇಲೆ ವರ್ಗಾವಣೆಗೆ ಅರ್ಜಿ ಸಲ್ಲಿಸುವುದಾದಲ್ಲಿ ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ On Line ನಲ್ಲಿ ಮಾತ್ರ ಅರ್ಜಿಯನ್ನು ಭರ್ತಿ ಮಾಡಬೇಕು. ಮತ್ತು ಅರ್ಜಿ ಸಲ್ಲಿಸಿದ ಎರಡು ದಿನಗಳ ಒಳಗಾಗಿ ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಕಛೇರಿಗೆ ಸೇವಾ ಮಾಹಿತಿ ಪರಿಶೀಲನೆಗೆ ಅಗತ್ಯ ದಾಖಲೆಗಳೊಂದಿಗೆ ಖುದ್ದಾಗಿ ಹಾಜರಾಗತಕ್ಕದ್ದು.
2. **ಒಂದು ಜೇಷ್ಠತಾ ಘಟಕದಿಂದ ಇನ್ನೊಂದು ಜೇಷ್ಠತಾ ಘಟಕದ ವರ್ಗಾವಣೆಗೆ On Line ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:-** ಒಂದು ಜೇಷ್ಠತಾ ಘಟಕದಿಂದ ಇನ್ನೊಂದು ಜೇಷ್ಠತಾ ಘಟಕಕ್ಕೆ ವರ್ಗಾವಣೆಗೆ ಅರ್ಜಿ ಸಲ್ಲಿಸುವವರು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಶಿಕ್ಷಕರ ವರ್ಗಾವಣೆ ನಿಯಂತ್ರಣ ಅಧಿನಿಯಮ 2007ರ ಸೆಕ್ಷನ್ 6(1)ರ ನಿಬಂಧನೆಗೆ ಒಳಪಟ್ಟು ಮತ್ತು ಸೆಕ್ಷನ್ 6(2)ರ (1) (2) (3) (4) (5)ರಲ್ಲಿನ ಹಾಗೂ ಉಲ್ಲೇಖ-5 ಮತ್ತು ಉಲ್ಲೇಖ-6ರ ಅವಕಾಶದಂತೆ, ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ On Line ನಲ್ಲಿ ಮಾತ್ರ ಅರ್ಜಿಯನ್ನು ಭರ್ತಿ ಮಾಡಬೇಕು. ಮತ್ತು ಅರ್ಜಿ ಸಲ್ಲಿಸಿದ ಎರಡು ದಿನಗಳ ಒಳಗಾಗಿ ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಕಛೇರಿಗೆ ಸೇವಾ ಮಾಹಿತಿ ಪರಿಶೀಲನೆಗೆ ಅಗತ್ಯ ದಾಖಲೆಗಳೊಂದಿಗೆ ಖುದ್ದಾಗಿ ಹಾಜರಾಗತಕ್ಕದ್ದು.
3. **ಪರಸ್ಪರ ವರ್ಗಾವಣೆಗೆ On Line ನಲ್ಲಿ ಅರ್ಜಿ ಸಲ್ಲಿಸುವ ಕ್ರಮ ಮತ್ತು ಅರ್ಹತೆ:-** ಪರಸ್ಪರ ವರ್ಗಾವಣೆಗೆ ಅರ್ಜಿ ಸಲ್ಲಿಸುವವರು ಸಹ ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ On Line ನಲ್ಲಿ ಅರ್ಜಿ ಭರ್ತಿ ಮಾಡಬೇಕು.

   (ಅ) ಖಾಯಂ ಪೂರ್ವ ಸೇವಾ ಅವಧಿಯು ಘೋಷಣೆಯಾಗಿರಬೇಕು.

(ಆ) ವರ್ಗಾವಣೆ ನಿಯಮ 15ರಡಿಯಲ್ಲಿ ಬಿಡುಗಡೆಯಾದ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳು ಪ್ರಸ್ತುತ ಸ್ಥಳದಲ್ಲಿ 3 ವರ್ಷ ಸೇವಾವಧಿ ಪೂರ್ಣಗೊಳಿಸಿರಬೇಕು.

(ಇ) ಒಂದೇ ಕ್ಲಸ್ಟರ್ [ಸಮೂಹ] ವ್ಯಾಪ್ತಿಯಲ್ಲಿ ಪರಸ್ಪರ ವರ್ಗಾವಣೆ ಬಯಸಿ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ.

(ಈ) ಪರಸ್ಪರ ವರ್ಗಾವಣೆ ಬಯಸುವ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ವಿಷಯ ಪರಿವೀಕ್ಷಕರ ಹುದ್ದೆಗೆ ಪರಸ್ಪರ ವರ್ಗಾವಣೆ ಬಯಸಿದಲ್ಲಿ ವಿಷಯ ಹೊಂದಾಣಿಕೆ ಮತ್ತು ಪ್ರೌಢ ಶಾಲಾ ವಿಭಾಗದಲ್ಲಿ ಕನಿಷ್ಠ 10 ವರ್ಷಗಳ ಬೋಧನಾ ಅನುಭವ ಹೊಂದಿರಬೇಕು.

(ಉ) ಪರಸ್ಪರ ವರ್ಗಾವಣೆ ಬಯಸುವ ಇಬ್ಬರೂ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳಿಗೆ ಒಂದೇ ವರ್ಗಾವಣೆ ಅರ್ಜಿ ಇರುತ್ತದೆ. ಪರಸ್ಪರ ವರ್ಗಾವಣೆ ಬಯಸುವವರು ಪರಸ್ಪರ ವಿಚಾರ ವಿನಿಮಯ ಮಾಡಿಕೊಂಡು ಅಂತರ್ಜಾಲದಲ್ಲಿ ಯಾರು ಕ್ರಮ ಸಂಖ್ಯೆ 1 ರಲ್ಲಿ ವೈಯಕ್ತಿಕ ಮಾಹಿತಿ ಭರ್ತಿ ಮಾಡಬೇಕೆಂದು ನಿರ್ಧರಿಸಿಕೊಂಡು ಅವರ ವೈಯಕ್ತಿಕ ಮಾಹಿತಿಯನ್ನು ಕ್ರಮ ಸಂಖ್ಯೆ 1 ರಲ್ಲಿ ಭರ್ತಿ ಮಾಡುವುದು. ತದನಂತರ ಕ್ರಮ ಸಂಖ್ಯೆ 1ರ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳ ಅರ್ಜಿ ಸಂಖ್ಯೆಯನ್ನೇ ಬಳಸಿಕೊಂಡು ಕ್ರಮ ಸಂಖ್ಯೆ 2ರಲ್ಲಿ ಸಂಬಂಧಿಸಿದ ಎರಡನೇ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ಅವರ ವೈಯಕ್ತಿಕ ಮಾಹಿತಿಯನ್ನು ಭರ್ತಿ ಮಾಡುವುದು. ಹೀಗೆ ಭರ್ತಿ ಮಾಡಿದ ಮಾಹಿತಿಯ ನಂತರ ಸಂಬಂಧಿಸಿದ ಉಪನಿರ್ದೇಶಕರು (ಆಡಳಿತ) ರವರ ಕಛೇರಿಗೆ ಖುದ್ದಾಗಿ ಭೇಟಿ ನೀಡಿ ಅರ್ಜಿಯ ಮಾಹಿತಿ ಸರಿಯಾಗಿರುವುದನ್ನು ಇಬ್ಬರು ಅರ್ಜಿದಾರರು ಖಚಿತಪಡಿಸಿಕೊಂಡು ಸ್ವೀಕೃತಿಯನ್ನು ಪಡೆಯುವುದು.

(ಊ) ಪರಸ್ಪರ ವರ್ಗಾವಣೆ ಬಯಸುವ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ಕೇವಲ ಒಬ್ಬರೊಂದಿಗೆ ಮಾತ್ರ ಪರಸ್ಪರ ವರ್ಗಾವಣಾ ಅರ್ಜಿ ಸಲ್ಲಿಸಬೇಕು. ಒಂದು ವೇಳೆ ಒಂದಕ್ಕಿಂತ ಹೆಚ್ಚು ಜನರೊಂದಿಗೆ ಪರಸ್ಪರ ವರ್ಗಾವಣೆಗೆ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

(ಋ) ಅರ್ಜಿ ಸಲ್ಲಿಸಿದ ಎರಡು ದಿನಗಳ ಒಳಗಾಗಿ ಅಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರ ಕಛೇರಿಗಳಿಗೆ ಸೇವಾ ಮಾಹಿತಿ ಪರಿಶೀಲನೆಗೆ ಖುದ್ದಾಗಿ ಖಡ್ಡಾಯವಾಗಿ ಹಾಜರಾಗತಕ್ಕದ್ದು.

(ಎ) ಪರಸ್ಪರ ವರ್ಗಾವಣೆ ಬಯಸುವ ಇಬ್ಬರೂ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದವರು ವರ್ಗಾವಣೆಗೆ ಅರ್ಜಿ ಸಲ್ಲಿಸಲು ನಿಗಧಿ ಪಡಿಸಿರುವ ಕೊನೆಯ ದಿನಾಂಕಕ್ಕೆ ಕನಿಷ್ಠ 3-ವರ್ಷಗಳ ಸೇವೆಯನ್ನು ಒಂದೇ ಸ್ಥಳದಲ್ಲಿ ಪೂರ್ಣಗೊಳಿಸಿರಬೇಕು ಮತ್ತು ನಿವೃತ್ತಿ ಹೊಂದಲು ಕನಿಷ್ಠ 3-ವರ್ಷಕ್ಕಿಂತ ಹೆಚ್ಚಿನ ಸೇವೆ ಹೊಂದಿರಬೇಕು.

(ಏ) ಪರಸ್ಪರ ವರ್ಗಾವಣೆಯು ಸೇವಾವಧಿಯಲ್ಲಿ ಒಂದಕ್ಕಿಂತ ಹೆಚ್ಚುಬಾರಿಗೆ ಅವಕಾಶವಿರುವುದಿಲ್ಲ ಹಾಗೂ ಜೇಷ್ಠತೆಯ ರಕ್ಷಣೆಗೆ ಅರ್ಹರಾಗಿರುವುದಿಲ್ಲ.

(ಐ) ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳ ಒಳಗಡೆ ಎ ವಲಯದಿಂದ ಎ ವಲಯಕ್ಕೆ ಪರಸ್ಪರ ವರ್ಗಾವಣೆಗೆ ಅವಕಾಶ ಇರುವುದಿಲ್ಲ.

(ಒ) ಪರಸ್ಪರ ವರ್ಗಾವಣೆ ಬಯಸುವ ಇಬ್ಬರೂ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ನಿಗಧಿತ ದಿನಾಂಕದಂದು ವರ್ಗಾವಣೆ ಅರ್ಜಿಯ ಕ್ರಮ ಸಂಖ್ಯೆ (1)ರ ಮುಖ್ಯ ಶಿಕ್ಷಕರ ವರ್ಗಾವಣಾ ಪ್ರಾಧಿಕಾರದ ಬಳಿ ಇಬ್ಬರೂ ಕೌನ್ಸಿಲಿಂಗ್‌ಗೆ ಹಾಜರಾಗತಕ್ಕದ್ದು.

4. <u>**ಕೋರಿಕೆ ವರ್ಗಾವಣೆಗೆ ಆದ್ಯತೆ ಬಯಸಿ ಅರ್ಜಿ ಸಲ್ಲಿಸುವ ಬಗೆ:-**</u> ಆದ್ಯತೆ ಬಯಸಿ ಅರ್ಜಿ ಸಲ್ಲಿಸುವವರು, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007ರ ಅನ್ವಯ ಹಾಗೂ ಅದರಡಿಯಲ್ಲಿ ರೂಪಿಸಲಾಗಿರುವ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007, ಹಾಗೂ ತಿದ್ದುಪಡಿ ನಿಯಮಗಳು 2011 ಮತ್ತು 2015ರಂತೆ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ಸಕ್ಷಮ ಪ್ರಾಧಿಕಾರದಿಂದ ಪಡೆದು ಅರ್ಜಿ ಸಲ್ಲಿಸತಕ್ಕದ್ದು, ಮತ್ತು ಮೂಲ ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ನೀಡತಕ್ಕದ್ದು. ಆದ್ಯತಾ ಪ್ರಕರಣಗಳ ವಿವರ ಕೆಳಗಿನಂತಿರುತ್ತದೆ.

5. <u>**ಆದ್ಯತಾ ಪಟ್ಟಿ ಸಿದ್ಧಪಡಿಸುವ ಕ್ರಮ:**</u>

[ಅ] <u>**ಅತ್ಯಂತ ತೀವ್ರ ಖಾಯಿಲೆಯ ಪ್ರಕರಣಗಳು:-**</u> ಅತ್ಯಂತ ತೀವ್ರತರವಾದ ಕಾಯಿಲೆಯ ಪ್ರಕರಣಗಳಲ್ಲಿ ಅಧಿನಿಯಮದ 6 [2] [4] ರಲ್ಲಿ ಸೂಚಿಸಿದಂತೆ ಶಿಕ್ಷಕರು ಅಥವಾ ಅವರ / ಅವಳ ಗಂಡ / ಹೆಂಡತಿ ಅಥವಾ ಮಕ್ಕಳು ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದಲ್ಲಿ ನಿಯಮಾನುಸಾರ ಜಿಲ್ಲಾ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರವನ್ನು ಹಾಜರುಪಡಿಸುವುದು. **ಹೃದಯ ಸಂಬಂಧಿ, ಕಿಡ್ನಿ, ಕ್ಯಾನ್ಸರ್ ಮತ್ತು ಹೆಚ್.ಐ.ವಿ ಕಾಯಿಲೆಗಳಿಂದ ನರಳುತ್ತಿರುವವರಿಗೆ ಮಾತ್ರ ಈ ಪ್ರಕರಣದಡಿ ಅರ್ಜಿ ಸಲ್ಲಿಸಲು ಅವಕಾಶವಿದೆ. ಸುಳ್ಳು ಪ್ರಮಾಣಪತ್ರಗಳನ್ನು ಸಲ್ಲಿಸಿದಲ್ಲಿ ಯಾವುದೇ ಸೂಚನೆ ನೀಡದೆ ಶಿಸ್ತಿನ ಕ್ರಮ ಜರುಗಿಸಲಾಗುವುದು. ಪತಿ-ಪತ್ನಿ ಇಬ್ಬರೂ ಸರ್ಕಾರಿ ನೌಕರರಾಗಿದ್ದಲ್ಲಿ, ಯಾರಾದರೂ ಒಬ್ಬರು ಮಾತ್ರ ಈ ಆಧ್ಯತೆಯಡಿ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಅವಕಾಶವಿದೆ.**

[ಆ] <u>**ದೈಹಿಕ ಅಂಗವಿಕಲ ಪ್ರಕರಣಗಳು:-**</u> ದೈಹಿಕ ಅಂಗವಿಕಲ ಪ್ರಕರಣಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಶಸ್ತ್ರ ವೈದ್ಯರಿಂದ ಪ್ರಮಾಣೀಕರಿಸಲಾದಂತೆ ಶೇ.40% ಕ್ಕಿಂತ ಹೆಚ್ಚಿನ ಅಂಗವಿಕಲತೆ ಇರುವ ಬಗ್ಗೆ ಪಡೆದ ಪ್ರಮಾಣ ಪತ್ರವನ್ನು

ಹಾಜರುಪಡಿಸುವುದು. **ಸುಳ್ಳು ಪ್ರಮಾಣಪತ್ರಗಳನ್ನು ಸಲ್ಲಿಸಿದಲ್ಲಿ ಯಾವುದೇ ಸೂಚನೆ ನೀಡದೆ ಶಿಸ್ತಿನ ಕ್ರಮ ಜರುಗಿಸಲಾಗುವುದು.**

[ಇ] **ವಿಧವೆ ಶಿಕ್ಷಕಿಯರ ಪ್ರಕರಣಗಳು:-** ಪತಿಯ ಮರಣ ಪ್ರಮಾಣ ಪತ್ರ ಅಥವಾ ಇತರೆ ಯಾವುದಾದರು ಒಂದು ಅರ್ಹ ದಾಖಲೆಯನ್ನು ಹಾಜರುಪಡಿಸುವುದು.

[ಈ] **ಸೈನಿಕ ಪ್ರಕರಣಗಳು:-** ಭಾರತೀಯ ರಕ್ಷಣಾ ಪಡೆ/ಅರೆ ಮಿಲಿಟರಿ ಪಡೆಗಳಲ್ಲಿ (ಕೇಂದ್ರ ಗೃಹ ಸಚಿವಾಲಯವು ಕರೆಯುವ ಯಾವುದೇ ಹೆಸರಿನ ಸೈನಿಕರು) ಕಾರ್ಯನಿರ್ವಹಿಸುತ್ತಿರುವ/ ಮೃತರಾಗಿರುವ ಅವಲಂಬಿತರಿಗೆ ಒಂದು ಸಲದ ಕ್ರಮವಾಗಿ/ ನಿವೃತ್ತರಾಗಿರುವ ಅವಲಂಬಿತರಿಗೆ ಒಂದು ಸಲದ ಕ್ರಮವಾಗಿ/ ಶಾಶ್ವತ ಅಂಗವಿಕಲ ಸೈನಿಕರ ಪತಿ ಅಥವಾ ಪತ್ನಿ ರವರು, ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಹಾಜರುಪಡಿಸುವುದು.

[ಉ] **ವಿವಾಹಿತ ಶಿಕ್ಷಕರ ಪ್ರಕರಣ:-** ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007ರ ನಿಯಮ 7(1)(ಡಿ) ರಲ್ಲಿ ತಿಳಿಸಿರುವಂತೆ ಅಧಿನಿಯಮದ 6ನೇ ಪ್ರಕರಣದ (2) ಉಪ ಪ್ರಕರಣದ (1)ನೇ ಖಂಡದ ಪ್ರಕಾರ ಅಗತ್ಯ ಪ್ರಮಾಣ ಪತ್ರ ಸಲ್ಲಿಸಿ ವಿವಾಹಿತ ಶಿಕ್ಷಕರ ಪ್ರಕರಣದಡಿ ಆದ್ಯತೆ ಕೋರತಕ್ಕದ್ದು. **ಗಂಡ ಹೆಂಡತಿ ಇಬ್ಬರೂ ಸರ್ಕಾರಿ ನೌಕರರಾಗಿದ್ದಲ್ಲಿ ಮತ್ತು ಮುಖ್ಯ ಶಿಕ್ಷಕ ವೃಂದದ ಅಧಿಕಾರಿಗಳು ಪ್ರಸ್ತುತ ಇರುವ ಜೇಷ್ಠತಾ ಘಟಕದಲ್ಲಿ ಕನಿಷ್ಠ ಮೂರು (3) ವರ್ಷಗಳ ಸೇವೆಯನ್ನು ಸಲ್ಲಿಸಿದಲ್ಲಿ ಮಾತ್ರ ಕೌನ್ಸಿಲಿಂಗ್ ಮೂಲಕ ಆತನ/ಆಕೆಯ ಹೆಂಡತಿ/ಗಂಡ ಸೇವೆ ಸಲ್ಲಿಸುತ್ತಿರುವ ಸ್ಥಳಕ್ಕೆ ಅಥವಾ ಹತ್ತಿರದ ಸ್ಥಳಕ್ಕೆ ಸ್ಪಷ್ಟ ಖಾಲಿ ಸ್ಥಳದ ಲಭ್ಯತೆಯ ಆಧಾರದ ಮೇರೆಗೆ ಸೇವಾ ಅವಧಿಯಲ್ಲಿ ಎರಡು ಬಾರಿಗಿಂತ ಹೆಚ್ಚಿಲ್ಲದೆ ವರ್ಗಾವಣೆ ಮಾಡಲು ಅವಕಾಶವಿದೆ.**

**ವಿವಾಹಿತ ಶಿಕ್ಷಕರ ಪ್ರಕರಣದಲ್ಲಿ ಈ ಮುಂದಿನ ಆಧ್ಯತಾ ಕ್ರಮ ಇರತಕ್ಕದ್ದು:**

ಎ) ಪತಿ ಅಥವಾ ಪತ್ನಿ ಇಬ್ಬರೂ ಸರ್ಕಾರಿ ನೌಕರರಾಗಿರುವ ಪ್ರಕರಣಗಳು

ಬಿ) ಪತಿ ಅಥವಾ ಪತ್ನಿ ಇಬ್ಬರಲ್ಲಿ ಒಬ್ಬರು ಸರ್ಕಾರಿ ನೌಕರರಾಗಿದ್ದು ಮತ್ತೊಬ್ಬರು ಅನುದಾನಿದ ಶೈಕ್ಷಣಿಕ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಕರಣಗಳು (ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಅನುದಾನಿತ ಸಂಸ್ಥೆಯ ನೌಕರರು ಎಂದರೆ ಸರ್ಕಾರದ ಅನುದಾನಿತ ಶೈಕ್ಷಣಿಕ ಸಂಸ್ಥೆಯ ಅನುದಾನಕ್ಕೊಳಪಟ್ಟ ಖಾಯಂ ನೌಕರರು ಎಂಬುದಾಗಿ ತಿಳಿಯತಕ್ಕದ್ದು ಮತ್ತು ಈ ಕುರಿತಂತೆ ಅಗತ್ಯ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) (ಈ ಆದ್ಯತೆಯು ಕೇವಲ ಘಟಕದ ಹೊರಗಿನ ವರ್ಗಾವಣೆ ಕೋರಿಕೆಗೆ ಅನ್ವಯವಾಗುತ್ತದೆ) ಈ ಆದ್ಯತೆಯ ಶಿಕ್ಷಕರನ್ನು, ಆತನ/ಆಕೆಯ ಕೋರಿಕೆಯ ಮೇರೆಗೆ, ಕೌನ್ಸಿಲಿಂಗ್ ಪ್ರಕ್ರಿಯೆಯ ಮೂಲಕ, ಜ್ಯೇಷ್ಠತಾ ಘಟಕದ ಹೊರಗೆ ಅವರ ಪತಿ/ಪತ್ನಿ ಕರ್ತವ್ಯನಿರ್ವಹಿಸುತ್ತಿರುವ ಅನುದಾನಿತ ಶೈಕ್ಷಣಿಕ ಸಂಸ್ಥೆಯಲ್ಲಿನ ಅಂತಹ ಸ್ಥಳ ಅಥವಾ ಹತ್ತಿರ ಸ್ಥಳ ಅಥವಾ ಹುದ್ದೆಗೆ, ಅಂದರೆ ನಗರ ಪ್ರದೇಶವನ್ನು ಹೊರತುಪಡಿಸಿ, ವರ್ಗಾಯಿಸಬಹುದು)

ಸಿ) ಪತಿ ಅಥವಾ ಪತ್ನಿ ಇಬ್ಬರಲ್ಲಿ ಒಬ್ಬರು ಸರ್ಕಾರಿ ನೌಕರರಾಗಿರದ ಪ್ರಕರಣಗಳು

[ಊ] **ಇತರೆ ಶಿಕ್ಷಕಿಯರು**

[ಋ] **ಮನ್ನಣೆ ಪಡೆದ ರಾಜ್ಯ ಸರ್ಕಾರಿ ನೌಕರರ ಸಂಸ್ಥೆಗಳ ಚುನಾಯಿತ ಪದಾಧಿಕಾರಿಗಳು:-**
ರಾಜ್ಯ ಸರ್ಕಾರದಿಂದ ಮನ್ನಣೆ ಪಡೆದ ಕರ್ನಾಟಕ ರಾಜ್ಯ ಸರ್ಕಾರಿ ಶಿಕ್ಷಕರ ಸಂಘ ಅಥವಾ ಕರ್ನಾಟಕ ಸರ್ಕಾರಿ ನೌಕರರ ಸಂಘದ ಚುನಾಯಿತ ಪದಾಧಿಕಾರಿಯಾಗಿದ್ದಲ್ಲಿ ಸಂಘದವರಿಂದ ಪ್ರಮಾಣೀಕರಿಸಿರುವ ಪ್ರಮಾಣ ಪತ್ರಗಳನ್ನು ಪಡೆದು ಹಾಜರುಪಡಿಸುವುದು. ನಾಮ ನಿರ್ದೇಶನ ಮಾಡಿಕೊಂಡ ಪದಾಧಿಕಾರಿಗಳು ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

[ಎ] **ಇತರ ಶಿಕ್ಷಕರು**

ಮೇಲಿನ 'ಅ', 'ಆ', 'ಇ', 'ಈ', 'ಉ' ಮತ್ತು 'ಋ' ಪ್ರಕರಣಗಳಲ್ಲಿ ಆದ್ಯತೆ ಬಯಸುವ ಅಧಿಕಾರಿಗಳು ಆದ್ಯತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ಪ್ರಾಧಿಕಾರದಿಂದ ಅರ್ಜಿ ಪರಿಶೀಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಹಾಜರುಪಡಿಸತಕ್ಕದ್ದು.

6. **ಖಾಯಂ ಪೂರ್ವ ಸೇವಾ ಅವಧಿ:-** ಖಾಯಂ ಪೂರ್ವ ಸೇವಾ ಅವಧಿ ಪೂರೈಸದ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ಯಾವುದೇ ತರಹದ (ಕೋರಿಕೆ, ಪರಸ್ಪರ) ವರ್ಗಾವಣೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

7. **ಮೂರು ವರ್ಷಗಳ ಅವಧಿಯವರೆಗೆ 11ನೇ ನಿಯಮದಡಿಯಲ್ಲಿ ಕೌನ್ಸಿಲಿಂಗ್‌ಗೆ ಅರ್ಹರಾಗಿರತಕ್ಕದ್ದಲ್ಲ:-** ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007,ರ 15ನೇ ನಿಯಮದಡಿಯಲ್ಲಿ ಬಿಡುಗಡೆಯಾದಂತ ಅರ್ಜಿದಾರರು, ಮುಂದಿನ ಮೂರು ವರ್ಷಗಳ ಅವಧಿಯವರೆಗೆ ವರ್ಗಾವಣೆಗೆ ಸಂಬಂಧಿಸಿದಂತೆ 11ನೇ ನಿಯಮದಡಿಯಲ್ಲಿ ಕೌನ್ಸಿಲಿಂಗ್‌ಗೆ ಅರ್ಹರಾಗಿರತಕ್ಕದ್ದಲ್ಲ.

8. **ಇಲಾಖಾ ವೆಬ್ ಸೈಟ್‌ನಲ್ಲಿ ಮಾಹಿತಿ:-** ವರ್ಗಾವಣಾ ವೇಳಾ ಪಟ್ಟಿಯಂತೆ ನಿಗದಿತ ಅವಧಿಯಲ್ಲಿ ಎಲ್ಲಾ ಕಾರ್ಯಗಳನ್ನು ನಿಯಮಾನುಸಾರ ನಡೆಸಬೇಕಾಗಿದ್ದು, ವರ್ಗಾವಣೆ ಬಗ್ಗೆ ಕಾಲಕಾಲಕ್ಕೆ ಹೆಚ್ಚಿನ ಮಾಹಿತಿ ಇತ್ಯಾದಿ ವಿಷಯದ ಬಗ್ಗೆ ಅಧಿಸೂಚನೆ : ಆದೇಶ : ಸುತ್ತೋಲೆಗಳನ್ನು ಹೊರಡಿಸಿದಲ್ಲಿ ಈ ಮಾಹಿತಿಯನ್ನು ಇಲಾಖೆಯ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ ಸಂಬಂಧಿಸಿದ ಅಧಿಕಾರಿಗಳು ಪ್ರತಿದಿನ ಇಲಾಖಾ Web Site ನೋಡಿ ಮಾಹಿತಿ ಪಡೆದುಕೊಳ್ಳಲು ತಿಳಿಸಿದೆ.

9. **ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳು:-** ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಅದನ್ನು ಸಮರ್ಥಿಸುವ ದಾಖಲೆಗಳೊಂದಿಗೆ ಆಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ)/ ರಾಜ್ಯ ಕಛೇರಿಯ ಮುಖ್ಯಸ್ಥರವರಿಗೆ ನಿಗಧಿಪಡಿಸಿರುವ ಅವಧಿಯೊಳಗೆ ಸಲ್ಲಿಸತಕ್ಕದ್ದು.

**ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ಮತ್ತು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆಗಳು:**

1. **ವರ್ಗಾವಣೆ ಅರ್ಜಿಗಳ ಪರಿಶೀಲನೆ:-** ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ಅಂತರ್ಜಾಲದ [On Line] ಮೂಲಕ ಸಲ್ಲಿಸಿದ ವರ್ಗಾವಣೆ ಅರ್ಜಿಗಳಲ್ಲಿನ ಸೇವಾ ವಿವರಗಳು [ಹೆಸರು, ಜನ್ಮ ದಿನಾಂಕ, ಪದನಾಮ, ಶಾಲಾ, ಕಾಲೇಜು, ಕಚೇರಿ ವಿಳಾಸ, ಪ್ರಸ್ತುತ ವೃಂದದಲ್ಲಿ ಸಲ್ಲಿಸಿರುವ ಸೇವಾ ವಿವರ, ಬಯಸಿರುವ ಆದ್ಯತೆ, ಇತ್ಯಾದಿ] ಸರಿಯಿದೆಯೇ ಎಂಬುದನ್ನು ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರು ನಿಯಮಾನುಸಾರ ಪರಿಶೀಲಿಸತಕ್ಕದ್ದು ಮತ್ತು ಅಭ್ಯರ್ಥಿ ಸಮ್ಮುಖದಲ್ಲಿ ಪ್ರಮಾಣೀಕರಿಸತಕ್ಕದ್ದು.

2. **ಪರಸ್ಪರ ವರ್ಗಾವಣೆಗೆ ಅರ್ಜಿಗಳ ಪರಿಶೀಲನೆ:-** ಪರಸ್ಪರ ವರ್ಗಾವಣೆಗೆ ಸಲ್ಲಿಸಿರುವ ಒಂದೇ ಅರ್ಜಿಯನ್ನು ಅಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರು, ಅಧಿಕಾರಿ-1 ಮತ್ತು ಅಧಿಕಾರಿ-2ರ ಮಾಹಿತಿ ಸರಿ ಇದೆ ಎಂಬುದನ್ನು ಪರಿಶೀಲಿಸಿ ಸರಿ ಇದ್ದಲ್ಲಿ ಅನುಮೋದನೆ ನೀಡತಕ್ಕದ್ದು. ಇಬ್ಬರು ಅಧಿಕಾರಿಗಳು ಒಂದೇ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದರೆ ಅಧಿಕಾರಿ-1ರ ಮಾಹಿತಿ ಸರಿ ಇದೆ ಎಂಬುದನ್ನು ಪರಿಶೀಲಿಸಿ ಅನುಮೋದನೆ ನೀಡತಕ್ಕದ್ದು ಮತ್ತು ಅಧಿಕಾರಿ-2ರ ಮಾಹಿತಿ ಸರಿ ಇದೆ ಎಂಬುದನ್ನು ಸಹ ಪರಿಶೀಲಿಸಿ ಮತ್ತೊಮ್ಮೆ ಅನುಮೋದನೆ ನೀಡತಕ್ಕದ್ದು. ಒಂದೇ ಕ್ಲಸ್ಟರ್ (ಸಮೂಹ) ವ್ಯಾಪ್ತಿಯಲ್ಲಿ ಪರಸ್ಪರ ವರ್ಗಾವಣೆ ಪ್ರಕರಣಗಳನ್ನು ಪರಿಗಣಿಸತಕ್ಕದ್ದಲ್ಲ.

3. **ಆಯಾ ವೃಂದದಲ್ಲಿ ಸಲ್ಲಿಸಿದ ಸೇವೆಯ ವೆಯ್ಟೇಜ್ ಬಗ್ಗೆ ಪರಿಶೀಲನೆ:-** ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 173 ಇಟಿಆರ್ 2007 ದಿನಾಂಕ: 14.11.2007 ರಲ್ಲಿ ಅಧಿಸೂಚಿಸಲಾಗಿರುವ ಅನುಸಾರ ಎ, ಬಿ, ಸಿ ವಲಯಗಳ ಪ್ರಕಾರ ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 37 ಇಟಿಆರ್ 2009, ದಿನಾಂಕ: 23.04.2011ರಲ್ಲಿ ನಿಯಮ 7(2)ಕ್ಕೆ ಪ್ರತಿಯೋಜಿಸಿರುವಂತೆ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ವೃಂದಕ್ಕೆ ಬಂದ ದಿನಾಂಕದ ನಂತರ ಕರ್ತವ್ಯ ನಿರ್ವಹಿಸಿದ ಎಲ್ಲಾ ಸ್ಥಳಗಳಲ್ಲಿ ಸಲ್ಲಿಸಿರುವ ಸೇವೆಯನ್ನು ಅರ್ಜಿ ಸಲ್ಲಿಸುವ ದಿನಾಂಕದವರೆಗೆ ಸರಿಯಾಗಿ ದಾಖಲು ಮಾಡಿದ್ದಾರೆಯೆ? ಎಂಬ ಬಗ್ಗೆಯೂ ಸಹ ಜಿಲ್ಲಾ ಉಪನಿರ್ದೇಶಕರು [ಆಡಳಿತ] ಸಾರ್ವಜನಿಕ ಶಿಕ್ಷಣ ಇಲಾಖೆ ರವರು On Line ನಲ್ಲಿ ಪರಿಶೀಲಿಸಿ ಪ್ರಮಾಣೀಕರಿಸತಕ್ಕದ್ದು.

   **ಉದಾ:-** ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಸೇವೆಗೆ [ನೇರ ನೇಮಕಾತಿ. ಬಡ್ತಿ, ನಿಯಮ-32] ಸೇರಿದ ದಿನಾಂಕದಿಂದ ಮಾತ್ರ ವೆಯಿಟೇಜ್ ಅಂಕಗಳನ್ನು ಪರಿಗಣಿಸಿ ಸಿದ್ದಪಡಿಸುವುದು. ಬಡ್ತಿ ಮುಖ್ಯ ಶಿಕ್ಷಕರಿಗೆ ಸಂಬಂಧಿಸಿದಂತೆ ಅವರು ನಿಯಮ-32ರಡಿಯಲ್ಲಿ ಸಲ್ಲಿಸಿದ ಸೇವೆಯನ್ನು ಸಹ ವೆಯ್ಟೇಜ್‌ಗೆ ಪರಿಗಣಿಸತಕ್ಕದ್ದು.

4. **ವರ್ಗಾವಣೆ ಅರ್ಜಿಗಳ ಅನುಮೋದನೆ:-** ಇಲಾಖೆಯ On Line ನಲ್ಲಿ ದಾಖಲಾದ ಅರ್ಜಿಗಳನ್ನು ಪ್ರತಿದಿನ ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ರವರು ಅವರಿಗೆ ನೀಡಿದ User ID ಮತ್ತು Password ಗಳನ್ನು ಉಪಯೋಗಿಸಿ On Line ಗೆ ಪ್ರವೇಶ ಪಡೆದು ಅರ್ಜಿ ಸಲ್ಲಿಸಿರುವವರ ಸಮ್ಮುಖದಲ್ಲಿ ದಾಖಲೆಗಳ ಆಧಾರದ ಮೇಲೆ ಪರಿಶೀಲಿಸಬೇಕು. ಮಾಹಿತಿಗಳು ಸರಿ ಇವೆ ಎಂದು ಖಚಿತವಾದ ನಂತರ ಅಥವಾ ತಿದ್ದುಪಡಿ ಮಾಡಿದ ನಂತರ ಅರ್ಜಿಯನ್ನು ಅನುಮೋದಿಸಿ, ಅನುಮೋದಿತ ಅರ್ಜಿಯ ಪ್ರತಿಯನ್ನು ಮುದ್ರಿಸಿ ಸಹಿ ಮತ್ತು ಸೀಲು ಹಾಕಿ ದೃಢೀಕರಿಸಿ ಒಂದು ಪ್ರತಿಯನ್ನು ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆಯ ಕಛೇರಿಯಲ್ಲಿ ರಕ್ಷಾ ಕಡತದಲ್ಲಿಡುವುದು. (ಆದ್ಯತೆಗೆ ಸಂಬಂಧಿಸಿದ ದಾಖಲೆಗಳ ಫೋಟೊ ಪ್ರತಿಯೊಂದಿಗೆ) ಹಾಗೂ ಅರ್ಜಿದಾರರಿಗೆ ಒಂದು ಪ್ರತಿಯನ್ನು ದೃಢೀಕರಿಸಿ ನೀಡುವುದು.

5. **ಆದ್ಯತಾ ಪ್ರಮಾಣ ಪತ್ರಗಳ ಪರಿಶೀಲನೆ:-** ಆದ್ಯತೆ ಬಯಸಿ ಅರ್ಜಿ ಸಲ್ಲಿಸಿರುವ ಅಧಿಕಾರಿಗಳ ಅರ್ಜಿಗಳನ್ನು ಸಕ್ಷಮ ಪ್ರಾಧಿಕಾರ ನೀಡಿರುವ ಮೂಲ ಪ್ರಮಾಣ ಪತ್ರಗಳೊಂದಿಗೆ ಪರಿಶೀಲಿಸಿ ಆದ್ಯತೆಗೆ ಅರ್ಹವಿದ್ದಲ್ಲಿ ಮಾತ್ರ ಆದ್ಯತೆಗೆ ಪರಿಗಣಿಸತಕ್ಕದ್ದು. ಇಲ್ಲವಾದಲ್ಲಿ ಇತರೆ ಶಿಕ್ಷಕಿ, ಅಥವಾ ಇತರೆ ಶಿಕ್ಷಕರ ಪ್ರಕರಣಗಳಲ್ಲಿ ಪರಿಗಣಿಸತಕ್ಕದ್ದು.

6. **ಅರ್ಜಿ ಹಾಗೂ ಆದ್ಯತಾ ಪ್ರಮಾಣ ಪತ್ರಗಳನ್ನು ವರ್ಗಾವಣಾ ಪ್ರಾಧಿಕಾರಕ್ಕೆ ಸಲ್ಲಿಸುವುದು;-** ಉಪನಿರ್ದೇಶಕರು [ಆಡಳಿತ] ಹಾಗೂ ರಾಜ್ಯ ಕಛೇರಿಗಳ [ಆಯುಕ್ತರ ಕಛೇರಿ, ಎಸ್.ಎಸ್.ಎ., ಕ.ಪ್ರೌ.ಶಿ.ಪ.ಮಂಡಳಿ, ಪಠ್ಯ ಪುಸ್ತಕ ಸಂಘ,

ಮೈನಾರಿಟಿ, ಡಯಟ್, ಸಹ ನಿರ್ದೇಶಕರ ಕಛೇರಿಗಳು] ಮುಖ್ಯಸ್ಥರುಗಳು ಅಭ್ಯರ್ಥಿಗಳ ಅರ್ಜಿ ಮತ್ತು ಆದ್ಯತೆಯ ಮೂಲ ಪ್ರಮಾಣ ಪತ್ರಗಳನ್ನು ಕ್ರೂಢೀಕರಿಸಿ ಕ್ರೂಢಿಕೃತ ಪಟ್ಟಿಯೊಂದಿಗೆ ಸಂಬಂಧಿಸಿದ ವರ್ಗಾವಣಾ ಪ್ರಾಧಿಕಾರಕ್ಕೆ ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಲ್ಲಿಸತಕ್ಕದ್ದು.

7. **ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳು:-** ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳೇನಾದರೂ ಬಂದಲ್ಲಿ ಸಮರ್ಥಿಸುವ ದಾಖಲೆಗಳೊಂದಿಗೆ ಪರಿಶೀಲಿಸಿ ಕ್ರೂಢೀಕೃತ ಮಾಹಿತಿಯನ್ನು ಸೂಕ್ತ ಷರಾ ಹಾಗೂ ದಾಖಲೆಗಳೊಂದಿಗೆ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ವರ್ಗಾವಣಾ ಪ್ರಾಧಿಕಾರಕ್ಕೆ ನಿಗಧಿತ ದಿನಾಂಕದಂದು ಮುದ್ದಾಂ ಸಲ್ಲಿಸತಕ್ಕದ್ದು. ಯಾವುದೇ ಆಕ್ಷೇಪಣೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ಸಲ್ಲಿಸತಕ್ಕದ್ದು.

8. **ಹಿಂದಿನ ವರ್ಷಗಳಲ್ಲಿ ವರ್ಗಾವಣೆ ಆದೇಶ ಪಡೆದು ಶಾಲಾ ಕರ್ತವ್ಯದಿಂದ ಬಿಡುಗಡೆ ಹೊಂದದೇ ಇದ್ದಲ್ಲಿ ಅಂತಹ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ವೃಂದದ ಅಧಿಕಾರಿಗಳ ಅರ್ಜಿಗಳನ್ನು ಈ ಸಾಲಿನಲ್ಲಿ ಪರಿಗಣಿಸಬಾರದು.**

9. **ಸಹಾಯವಾಣಿ:-** ಪ್ರಸಕ್ತ ಸಾಲಿನ ವರ್ಗಾವಣೆಗೆ ಸಂಬಂಧಿಸಿದಂತೆ, ಶಿಕ್ಷಕರಿಗೆ ಮಾಹಿತಿಯನ್ನು ನೀಡಲು ಉಪನಿರ್ದೇಶಕರ ಕಛೇರಿಗಳಲ್ಲಿ ಹಾಗು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳಲ್ಲಿ ಸಹಾಯವಾಣಿಯನ್ನು ಸ್ಥಾಪಿಸುವುದು ಹಾಗೂ ಸಹಾಯವಾಣಿ ಕೇಂದ್ರದಲ್ಲಿ ವಿಷಯವನ್ನರಿತ ಜವಾಬ್ದಾರಿಯುತ ಅಧಿಕಾರಿಗಳು ಮತ್ತು ನೌಕರರನ್ನು ನೇಮಿಸುವುದು.

10. **ಪ್ರಚಾರ:-** ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ವೃಂದದ ಅಧಿಕಾರಿಗಳು On Line ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ರವರ ಕಛೇರಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ಅಲ್ಲದೆ, ಸ್ಥಳಿಯ ಪತ್ರಿಕೆ ಮತ್ತು ಮಾಧ್ಯಮಗಳಲ್ಲಿ ಉಚಿತವಾಗಿ ಪ್ರಕಟಿಸುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವುದು.

11. **ಇಲಾಖಾ ವೆಬ್ ಸೈಟ್‌ನಲ್ಲಿ ಮಾಹಿತಿ:-** ವರ್ಗಾವಣಾ ವೇಳಾ ಪಟ್ಟಿಯಂತೆ ನಿಗದಿತ ಅವಧಿಯಲ್ಲಿ ಎಲ್ಲಾ ಕಾರ್ಯಗಳನ್ನು ನಿಯಮಾನುಸಾರ ನಡೆಸಬೇಕಾಗಿದ್ದು, ವರ್ಗಾವಣೆ ಬಗ್ಗೆ ಕಾಲಕಾಲಕ್ಕೆ ಹೆಚ್ಚಿನ ಮಾಹಿತಿ ಇತ್ಯಾದಿ ವಿಷಯದ ಬಗ್ಗೆ ಅಧಿಸೂಚನೆ : ಆದೇಶ : ಸುತ್ತೋಲೆಗಳನ್ನು ಹೊರಡಿಸಿದಲ್ಲಿ ಈ ಮಾಹಿತಿಯನ್ನು ಇಲಾಖೆಯ ವೆಬ್‌ಸೈಟನಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ ಸಂಬಂಧಿಸಿದ ಅಧಿಕಾರಿಗಳು ಪ್ರತಿದಿನ ಇಲಾಖಾ Web Site www.schooleducation.kar.nic.in ನೋಡಿ ಮಾಹಿತಿ ಪಡೆದುಕೊಳ್ಳಲು ತಿಳಿಸಿದೆ.

12. **ಅಧಿಕಾರಿಗಳ ಕರ್ತವ್ಯಗಳು:-** ಸರ್ಕಾರದ ಆದೇಶ ಮತ್ತು ನಿಯಮಗಳು ಹಾಗೂ ವೇಳಾಪಟ್ಟಿಯಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಜಿಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಸಂಬಂಧಿಸಿದ ಅಧಿಕಾರಿಗಳು ಕರ್ತವ್ಯಗಳನ್ನು ನಿರ್ವಹಿಸಲು ತಿಳಿಸಿದೆ.

13. **ಸಕ್ಷಮ ಪ್ರಾಧಿಕಾರದ ಕರ್ತವ್ಯಗಳು:-** ಉಲ್ಲೇಖಿತ ಸರ್ಕಾರದ ಆದೇಶಗಳನ್ವಯ ಹಾಗೂ ವೇಳಾಪಟ್ಟಿಯ ಪ್ರಕಾರ 2016-17ನೇ ಸಾಲಿನ ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳ ವರ್ಗಾವಣೆಗಳನ್ನು ಸಕ್ಷಮ ಪ್ರಾಧಿಕಾರಿಗಳು ಅವರವರ ಆಡಳಿತ ವ್ಯಾಪ್ತಿಯಲ್ಲಿ ಮಾಡಲು ಅಪರ ಆಯುಕ್ತರು ಗುಲ್ಬರ್ಗಾ ಮತ್ತು ಅಪರ ಆಯುಕ್ತರು, ಧಾರವಾಡ ರವರು ಕ್ರಮ ವಹಿಸುವಂತೆ ತಿಳಿಸಿದೆ.

14. **ಖಾಲಿ ಹುದ್ದೆಗಳ ಮಾಹಿತಿ:-** ವೇಳಾಪಟ್ಟಿಯ ಪ್ರಕಾರ ನಿಗಧಿಪಡಿಸಿರುವ ದಿನಾಂಕದ ಒಳಗಾಗಿ, ದಿನಾಂಕ 31-08-2016 ಕ್ಕೆ ಲಭ್ಯವಾಗುವ ಎಲ್ಲಾ ಖಾಲಿ ಹುದ್ದೆಗಳ ಮಾಹಿತಿಯನ್ನು ಇಲಾಖಾ ತಂತ್ರಾಂಶದಲ್ಲಿ ಆಯಾಯಾ ಉಪನಿರ್ದೇಶಕರು (ಆಡಳಿತ)/ ಕೇಂದ್ರ ಕಛೇರಿಯ ಮುಖ್ಯಸ್ಥರು ಭರ್ತಿ ಮಾಡುವುದು.

15. ಖಾಲಿ ಹುದ್ದೆಗಳ ಮಾಹಿತಿಯನ್ನು ನಿಗಧಿಪಡಿಸಿದ ದಿನಾಂಕಕ್ಕೆ ತಕ್ಕಂತೆ ತಂತ್ರಾಂಶದಲ್ಲಿ ಭರ್ತಿ ಮಾಡಿದ ನಂತರ ಪದೇ ಪದೇ ತಿದ್ದುಪಡಿ / ಬದಲಾವಣೆಗಾಗಲೀ ಈ ಕುರಿತು ಈ ಕಛೇರಿಗೆ ಪತ್ರವ್ಯವಹಾರ ಮಾಡುವುದು ಕಂಡುಬಂದಲ್ಲಿ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರನ್ನು ನೇರ ಹೊಣೆಗಾರರನ್ನಾಗಿ ಮಾಡಿ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

(ಸಹಿ)
ಆಯುಕ್ತರು

**ಇವರಿಗೆ,**
ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಮುಂದಿನ ಕ್ರಮಕ್ಕಾಗಿ

**ಪ್ರತಿಯನ್ನು:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳವರಿಗೆ
7. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
8. ಸಹ ನಿರ್ದೇಶಕರು-1 ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
9. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು
10. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು
11. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ), ಸಾ.ಶಿ.ಇಲಾಖೆ, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)
12. ರಾಜ್ಯದ ಎಲ್ಲಾ ತಾಲ್ಲೂಕ್ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳವರಿಗೆ.
13. ಆಯುಕ್ತರ ಆಪ್ತ ಕಾರ್ಯದರ್ಶಿಯವರಿಗೆ ಮಾಹಿತಿಗಾಗಿ
14. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ
15. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಘಟಕ, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು ಇವರಿಗೆ ಮುಂದಿನ ಕ್ರಮಕ್ಕಾಗಿ.
16. ಕಛೇರಿ ಪ್ರತಿ.

E:\Ananth\Transfer_2016-17\GHS Head Master-Transfer Notification-2016-17.doc